**ಕರ್ನಾಟಕ ವಿಧಾನ ಪರಿಷತ್ತು**
**ನೂರ ಮೂವತ್ತನೆಯ ಅಧಿವೇಶನ**
**ಕಾರ್ಯಕಲಾಪಗಳ ಪಟ್ಟಿ**
**ಮಂಗಳವಾರ, ದಿನಾಂಕ: 01ನೇ ಮಾರ್ಚ್, 2016**
**(ಸಮಯ: ಬೆಳಗ್ಗೆ 11.00 ಗಂಟೆಗೆ)**

******

## 01. ಸಂತಾಪ ಸೂಚನೆಗಳು

## 02. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಒಂದನೆಯ ಪಟ್ಟಿ

## 03. ಕಾರ್ಯದರ್ಶಿಯವರ ವರದಿ

**ಕಾರ್ಯದರ್ಶಿಯವರು: –**

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಸಭೆಯಲ್ಲಿ ಮಂಡಿಸುವುದು.

## 04. ಗಮನ ಸೆಳೆಯುವ ಸೂಚನೆಗಳು

**ಅ) ಶ್ರೀ ಬಸವರಾಜ ಹೊರಟ್ಟಿ** ಅವರು ರಾಜ್ಯದ ವಿವಿಧ ಜಿಲ್ಲೆಯ ಗ್ರಾಮೀಣ ಭಾಗಗಳಲ್ಲಿನ ಬೀದಿ ದೀಪಗಳು 24 ಘಂಟೆಗಳ ಕಾಲ ನಿರಂತರವಾಗಿ ಉರಿಯುತ್ತಿರುವುದರಿಂದ ವಿದ್ಯುತ್ ದುರ್ಬಳಕೆಯಾಗುವ ಕುರಿತು **ಮಾನ್ಯ ಇಂಧನ** ಸಚಿವರ ಗಮನ ಸೆಳೆಯುವುದು.

**ಆ) ಶ್ರೀಮತಿ ಮೋಟಮ್ಮ** ಅವರು ರಾಜ್ಯದ ತೋಟಗಾರಿಕೆ ಇಲಾಖೆಯ ಉಸ್ತುವಾರಿಯಲ್ಲಿರುವ ನಂದಿಗಿರಿಧಾಮದಲ್ಲಿ ಮೂಲಭೂತ ಸೌಕರ್ಯಗಳ ಕುರಿತು **ಮಾನ್ಯ ಕೃಷಿ ಮಾರುಕಟ್ಟೆ ಮತ್ತು ತೋಟಗಾರಿಕೆ** ಸಚಿವರ ಗಮನ ಸೆಳೆಯುವುದು.

**ಇ) ಶ್ರೀ ಕೋಟ ಶ್ರೀನಿವಾಸ ಪೂಜಾರಿ** ಅವರು ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ ವಿವಿಧ ಗ್ರಾಮ ಪಂಚಾಯತ್‌ಗಳಲ್ಲಿ ಹತ್ತಾರು ವರ್ಷಗಳಿಂದ ಗ್ರಾಮೀಣಾಭಿವೃದ್ಧಿಗಾಗಿ ದುಡಿಯುತ್ತಿರುವ ಸಿಬ್ಬಂದಿಗಳಿಗೆ ವೇತನ ಹೆಚ್ಚಳ, ಇ.ಎಸ್.ಐ (ಆರೋಗ್ಯ), ಪಿ.ಎಫ್ (ಭವಿಷ್ಯ ನಿಧಿ), ರಜೆ ಸೌಲಭ್ಯ, ಹೆರಿಗೆ ಭತ್ಯೆ ಹಾಗೂ ಜೀವನ ಭದ್ರತೆ ಸೇರಿದಂತೆ ಇನ್ನಿತರ ಸೌಲಭ್ಯಗಳನ್ನು ಒದಗಿಸುವ ಬಗ್ಗೆ **ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್** ಸಚಿವರ ಗಮನ ಸೆಳೆಯುವುದು.

## ೦೫. ನಿಯಮ ೩೩೦ರ ಮೇರೆಗೆ

**ಅ) ಕ್ಯಾಪ್ಟನ್ ಗಣೇಶ್ ಕಾರ್ಣಿಕ್** ಅವರು ದಕ್ಷಿಣ ಕನ್ನಡ ಜಿಲ್ಲೆಯ ಜೀವ ನದಿಗಳಾದ ನೇತ್ರಾವತಿ ಹಾಗೂ ಕುಮಾರಧಾರ ನದಿಯ ಉಪನದಿಯಾದ ಎತ್ತಿನ ಹೊಳೆಯ ನೀರನ್ನು ಚಿಕ್ಕಬಳ್ಳಾಪುರ, ಕೋಲಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಿಗೆ ಕುಡಿಯುವ ನೀರಿನ ಸಮಸ್ಯೆಯನ್ನು ಬಗೆಹರಿಸುವುದಕ್ಕಾಗಿ ಕೈಗೆತ್ತಿಕೊಂಡಿರುವ "ಎತ್ತಿನ ಹೊಳೆ" ಯೋಜನೆಯು ಅವೈಜ್ಞಾನಿಕವಾಗಿದ್ದು, ಇದರಿಂದಾಗಿ ಪರಿಸರದ ಮೇಲಾಗುವ ಪರಿಣಾಮಗಳು ಹಾಗೂ ಈ ಯೋಜನೆಯ ಟೆಂಡರ್ ಪ್ರಕ್ರಿಯೆಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ ಪ್ರಸ್ತಾಪಿಸುವುದು. **(ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು)**

**ಆ) ಶ್ರೀ ವಿ.ಎಸ್. ಉಗ್ರಪ್ಪ** ಅವರು ರಾಜ್ಯದಲ್ಲಿ ಸೋಲಾರ್ ವಿದ್ಯುತ್‌ಚ್ಛಕ್ತಿ ಉತ್ಪಾದನೆ ಮಾಡಲು ಇರುವ ಸಾಧಕ-ಬಾಧಕಗಳ ಕುರಿತು ಪ್ರಸ್ತಾಪಿಸುವುದು. **(ಮಾನ್ಯ ಇಂಧನ ಸಚಿವರು)**

## ೦೬. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

**ಅ)** "೨೦೧೬ನೇ ಫೆಬ್ರವರಿ, ೨೯ರಂದು ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಸದಸ್ಯರುಗಳನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನ ಪರಿಷತ್ತಿನ ಸದಸ್ಯರಾದ ನಾವು ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು **ಡಾ: ವೀರಣ್ಣ ಮತ್ತಿಕಟ್ಟಿ** ಅವರು ಸೂಚಿಸುವುದು;

**ಆ) ಶ್ರೀ ಐವನ್ ಡಿ'ಸೋಜಾ** ಅವರು ಅನುಮೋದಿಸುವುದು.

**ವಿ. ಶ್ರೀಶ್**
**ಕಾರ್ಯದರ್ಶಿ**

---